ಓ ಎಸ್ ನಂಃ 40/2022
ಪಿ ಡಬ್ಲ್ಯೂ ಃ 3

ದಿಃ 10.09.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿಗಳಾದ 1, 2, 4 ಮತ್ತು 5 ರ ಪರ ಶ್ರೀ ಹೆಚ್ ಎನ್ ಎಸ್ ವಕೀಲರಿಂದಃ-**

ನಾನು 5ನೇ ತರಗತಿವರೆಗೆ ವ್ಯಾಸಾಂಗ ಮಾಡಿರುತ್ತೇನೆ. ನನಗೆ ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರುತ್ತದೆ. ಸಾಕ್ಷ್ಯ ನುಡಿಯಲು ನ್ಯಾಯಾಲಯದಿಂದ ನೋಟಿಸ್ ಬಂದಿರುವುದಿಲ್ಲ. ಸಾಕ್ಷ್ಯ ನುಡಿಯಲು ನನ್ನನ್ನು ಲಕ್ಷ್ಮಮ್ಮ ರವರು ಕರೆದುಕೊಂಡು ಬಂದಿರುತ್ತಾರೆ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರಗಳು ಸತ್ಯ ವಾಗಿರುತ್ತದೆ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರಗಳು ನಾನೇ ಹೇಳಿ ಬರೆಸಿರುತ್ತೇನೆ. ರಂಗಯ್ಯನ ಮಗ ವೆಂಕಟರಾಮಯ್ಯ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ವೆಂಕಟರಾಮಯ್ಯ ಎಂದು ಹೇಳಿ ಬರೆಸಿಲ್ಲ ಎಂದರೆ ಸರಿಯಲ್ಲ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ವೆಂಕಟರಾಮಯ್ಯನಿಗೆ ಎರಡು ಹೆಸರುಗಳು ಇವೆ ಎಂದು ನಾನು ಹೇಳಿ ಬರೆಸಿರುವುದಿಲ್ಲ ಎಂದರೆ ಸರಿಯಲ್ಲ. ನಂಜುಂಡಯ್ಯ ಮತ್ತು ನಾರಾಯಣಪ್ಪನವರು ವೆಂಕಟರಾಮಯ್ಯ ಮಕ್ಕಳು ಎಂದು ತೋರಿಸಲು ನಾನು ದಾಖಲಾತಿಗಳನ್ನು ನೋಡಿರುತ್ತೇನೆ. ಸದರಿ ವಿಚಾರಕ್ಕೆ ಸಂಬಂಧಪಟ್ಟಂತೆ ನಾನು ಪಡಿತರ ಚೀಟಿ ಐಡೆಂಟಿಟಿ ಕಾರ್ಡ ನೋಡಿರುತ್ತೇನೆ. ತಾವು ಯಾವುದೇ ದಾಖಲಾತಿಗಳನ್ನು ನೋಡಿಲ್ಲದಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ವೆಂಕಟರಾಮಯ್ಯನ ಮಗ ನಂಜುಂಡಪ್ಪನವರು ಬುದ್ದಿಮಾಂದ್ಯ ಎಂದರೆ ಸರಿಯಲ್ಲ. ನಂಜುಂಡಪ್ಪನವರು ಬುದ್ದಿಮಾಂದ್ಯತೆಯನ್ನು ಹೊಂದಿದ್ದ ಕಾರಣ ಅವರಿಗೆ ಮದುವೆ ಆಗಿರುವುದಿಲ್ಲ ಎಂದರೆ ಸರಿಯಲ್ಲ. ತಮ್ಮ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಒಟ್ಟು ಕುಟುಂಬದ ಸ್ವತ್ತುಗಳು ಎಂದು ಹೇಳಿ ಬರೆಸಿಲ್ಲ ಎಂದರೆ ಸರಿ. ಒಟ್ಟು ಕುಟುಂಬ ಹಾಗೂ ಪಿತ್ರಾರ್ಜಿತ ಸ್ವತ್ತುಗಳ ವಿಸ್ತೀರ್ಣ ಹಾಗೂ ಚಕ್ಕುಬಂದಿಗಳು ನನಗೆ ಗೊತ್ತಿಲ್ಲ. ಒಟ್ಟು ಕುಟುಂಬ ಹಾಗೂ ಪಿತ್ರಾರ್ಜಿತ ಸ್ವತ್ತುಗಳ ಖಾತೆಯು ಯಾರ ಹೆಸರಿನಲ್ಲಿದೆ ಎಂದು ನನಗೆ

**ಓ ಎಸ್ ನಂಃ 40/2022**

**ಪಿ ಡಬ್ಲ್ಯೂ ಃ 3**

ಗೊತ್ತಿಲ್ಲ. ಲಕ್ಷ್ಮಮ್ಮ ರವರು ಕಲ್ಲ ಹಟ್ಟಿ ಪಾಳ್ಯದಲ್ಲಿ ವಾಸವಾಗಿದ್ದಾರೆ ಎಂದರೆ ಸರಿ. ಆಕೆಯು ಸುಮಾರು 5-6 ವರ್ಷಗಳಿಂದ ಅಲ್ಲಿ ವಾಸವಾಗಿದ್ದಾರೆ. ಲಕ್ಷ್ಮಮ್ಮ ರವರು ಒಟ್ಟು ಕುಟುಂಬದ ಆಸ್ತಿಗಳಲ್ಲಿ ಸ್ವಾಧೀನಾನುಭವದಲ್ಲಿದ್ದಾರೆ ಎಂದು ತೋರಿಸಲು ತಾವು ಯಾವ ದಾಖಲಾತಿಗಳನ್ನು ನೋಡಿದ್ದೀರ ಎಂದರೆ ಸಾಕ್ಷಿ ನೋಡಿರುತ್ತೇನೆ. ಸದರಿ ವಿಚಾರಕ್ಕೆ ಸಂಬಂಧಪಟ್ಟಂತೆ ನಾನು ಯಾವುದೇ ದಾಖಲಾತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ.

**ಈ ಹಂತದಲ್ಲಿ ನ್ಯಾಯಾಲಯದ ಸಮಯ ಮುಗಿದ ಕಾರಣ ಪಾಟೀ ಸವಾಲು ಮಧ್ಯಾಹ್ನ 2.45 ಕ್ಕೆ ಮುಂದೂಡಲಾಯಿತು.**

**(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

**ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಮಾಗಡಿ.**

**ಓ ಎಸ್ ನಂಃ 40/2022**
**ಪಿ ಡಬ್ಲ್ಯೂ ಃ 3**

**ದಿಃ 10.09.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಂದುವರಿದ ಪಾಟೀ ಸವಾಲುಃ ಪ್ರತಿವಾದಿಗಳಾದ 1, 2, 4 ಮತ್ತು 5 ರ ಪರ ಶ್ರೀ ಹೆಚ್ ಎನ್ ಎಸ್ ವಕೀಲರಿಂದಃ-**

ವಾದಿಯು ಈ ದಾವೆಯಲ್ಲಿ ಯಾವ ಪರಿಹಾರ ಕೋರಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ವಾದಿಯು ಮೂರು ಆಸ್ತಿಗಳಿಗೆ ಸಂಬಂಧಪಟ್ಟಂತೆ ಈ ದಾವೆಯನ್ನು ಸಲ್ಲಿಸಿರುತ್ತಾರೆ. ದಾವಾ ಆಸ್ತಿಗಳ ಚಕ್ಕುಬಂದಿ ಹಾಗೂ ವಿಸ್ತೀರ್ಣ ನನಗೆ ಗೊತ್ತಿಲ್ಲ. ದಾವಾ ಆಸ್ತಿಗಳ ಖಾತೆಯ ಜಂಟಿಯಾಗಿ ಯಾರ ಯಾರ ಹೆಸರಿನಲ್ಲಿದೆ ಎಂದು ನನಗೆ ಗೊತ್ತಿಲ್ಲ. ದಾವಾ ಸ್ವತ್ತುಗಳು ಯಾರು ಯಾರು ಕ್ರಯಕ್ಕೆ ಪಡೆದಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಸ್ವತ್ತುಗಳ ಖಾತೆಯು ಯಾರ ಹೆಸರಿನಲ್ಲಿದೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಸ್ವತ್ತುಗಳಲ್ಲಿ ಯಾರು ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿಯು ಸ್ವತ್ಲಃ ಮುಂದುವರಿದು ನನಗೆ ಗೊತ್ತಿದೆ ಎಂದು ಸಾಕ್ಷಿ ನುಡಿಯುತ್ತಾರೆ. ಸಂಜೀವಯ್ಯನ ಆಸ್ತಿಯನ್ನು ಸೇರಿಸಿ ಪ್ರಸ್ತುತ ದಾವೆಯನ್ನು ಸಲ್ಲಿಸಿದ್ದಾರೆ ಎಂದು ನನಗೆ ಗೊತ್ತಿಲ್ಲ. ವಾದಿ ಲಕ್ಷ್ಮಮ್ಮ ಪಾಲನಹಳ್ಳಿ ಗ್ರಾಮದಲ್ಲಿ ವಾಸವಿದ್ದಾರೆ ಎಂದು ತೋರಿಸಲು ನಾನು ಯಾವುದೇ ದಾಖಲಾತಿಗಳನ್ನು ನೋಡಿರುವುದಿಲ್ಲ. ವಾದಿಯು ಯಾವತ್ತೂ ಸಹ ಪಾಲನಹಳ್ಳಿ ಗ್ರಾಮದಲ್ಲಿ ವಾಸವಾಗಿಲ್ಲ ಎಂದರೆ ಸರಿಯಲ್ಲ. ತಮ್ಮ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಹೇಳಿರುವಂತೆ ವಾದಿ ರಂಗಯ್ಯನ ಮಗ ವೆಂಕಟರಾಮಯ್ಯ ಮೊದಲನೇ ಮಗನಾದ ನಂಜುಂಡಯ್ಯ ಹೆಂಡತಿ ಆಗಿರುತ್ತಾರೆ ಎಂದು ಹೇಳಿ ಬರೆಸಿರುವುದು ಸುಳ್ಳು ಎಂದರೆ ಸರಿಯಲ್ಲ. ದಾವಾ ಆಸ್ತಿಗಳಿಗೆ ಸಂಬಂಧಪಟ್ಟಂತೆ ತಾವು ದಾಖಲಾತಿಗಳನ್ನು ನೋಡಿಲ್ಲ. ವಾದಿಯು ಪ್ರತಿವಾದಿಗಳ ಜೊತೆ ಜಂಟಿ ಸ್ವಾಧೀನವನ್ನು ಹೊಂದಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತುಗಳು ನಾರಾಯಣಪ್ಪನವರಿಗೆ ಹೇಗೆ ಬಂದಿದೆ ಎಂದರೆ ನನಗೆ ಗೊತ್ತಿಲ್ಲ. ನಾನು ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಓ ಎಸ್ ನಂಃ 40/2022

ಪಿ ಡಬ್ಲ್ಯೂ ಃ 3

**ಮರು ವಿಚಾರಣೆ ಇಲ್ಲ.**

(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಓ

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ಮಾಗಡಿ.

ಓ ಎಸ್ ನಂಃ 40/2022
ಪಿ ಡಬ್ಲ್ಯೂ ಃ 4

ದಿಃ 10.09.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿಗಳಾದ 1, 2, 4 ಮತ್ತು 5 ರ ಪರ ಶ್ರೀ ಹೆಚ್ ಎನ್ ಎಸ್ ವಕೀಲರಿಂದಃ-**

ನನಗೆ ಕನ್ನಡ ಭಾಷೆ ಓದಲು ಬರೆಯಲು ಬರುವುದಿಲ್ಲ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಬರೆದಿರುವ ಸಂಗತಿಗಳು ನನಗೆ ತಿಳಿದಿರುವುದಿಲ್ಲ. ನನ್ನ ನನ್ನನ್ನು ಈ ನ್ಯಾಯಾಲಯದಲ್ಲಿ ಸಾಕ್ಷಿ ನುಡಿಯುವುದಕ್ಕೆ ವಾದಿಯೇ ಕರೆದುಕೊಂಡು ಬಂದಿರುತ್ತಾರೆ. ಈ ದಾವೆಯನ್ನು ಯಾವ ಸ್ವತ್ತುಗಳಿಗೆ ಸಂಬಂಧಪಟ್ಟಂತೆ ಸಲ್ಲಿಸಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಗಳು ಮೂಲತಃ ವೆಂಕಟರಮಣಪ್ಪನ ಸ್ವತ್ತುಗಳು. ದಾವಾ ಆಸ್ತಿಗಳನ್ನು ವೆಂಕಟರಮಣಪ್ಪ ಯಾರಿಗೆ ಕ್ರಯ ಮಾಡಿದ್ದಾರೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ದಾವಾ ಆಸ್ತಿಗಳಲ್ಲಿ ಈಗ 1ನೇ ಪ್ರತಿವಾದಿ ಜಯಮ್ಮನವರು ಸ್ವಾಧೀನಾನುಭವದಲ್ಲಿದ್ದಾರೆ. ದಾವಾ ಆಸ್ತಿಗಳಿಗೆ ಸಂಬಂಧಪಟ್ಟಂತೆ ಖಾತೆಯು 1 ನೇ ಪ್ರತಿವಾದಿಯ ಹೆಸರಿನಲ್ಲಿದೆ ಎಂದರೆ ನನಗೆ ಗೊತ್ತಿಲ್ಲ. ಯಾವ ಆಸ್ತಿಗಳಿಗೆ ಸಂಬಂಧಪಟ್ಟಂತೆ 1 ನೇ ಪ್ರತಿವಾದಿಯ ಜೊತೆ ಯಾರು ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ವಾದಿಯು ದಾವಾ ಆಸ್ತಿಗಳಲ್ಲಿ ಜಂಟಿ ಸ್ವಾಧೀನಾನುಭವ ಹೊಂದಿರುವ ಬಗ್ಗೆ ಯಾವುದೇ ದಾಖಲಾತಿಗಳನ್ನು ನೋಡಿರುವುದಿಲ್ಲ. ವಾದಿಯು ನಂಜುಂಡಪ್ಪನವರ ಹೆಂಡತಿ ಎಂದು ತೋರಿಸಲು ತಾವು ಯಾವುದಾದರೂ ದಾಖಲಾತಿಯನ್ನು ನೋಡಿದ್ದೀರ ಎಂದರೆ ಸಾಕ್ಷಿ ಇಲ್ಲ ಎಂದು ಸಾಕ್ಷ್ಯ ನುಡಿಯುತ್ತಾರೆ. ಸಾಕ್ಷಿ ಸ್ವತಃ ಮುಂದುವರಿದು ನಾನು ಅವರಿಬ್ಬರ ಮದುವೆಯನ್ನು ನೋಡಿರುತ್ತೇನೆ ಎಂದು ಸಾಕ್ಷ್ಯ ನುಡಿಯುತ್ತಾರೆ. ನಾರಾಯಣಪ್ಪನ ಅಣ್ಣ ನಂಜುಂಡಪ್ಪನವರು ಬುದ್ದಿಮಾಂದ್ಯ ಉಳ್ಳ ವ್ಯಕ್ತಿ ಎಂದರೆ ಸರಿಯಲ್ಲ. ನಂಜುಂಡಪ್ಪನವರು ಸುಮಾರು 50 ವರ್ಷಗಳ ಹಿಂದೆ ಮರಣ ಹೊಂದಿರುತ್ತಾರೆ ಎಂದರೆ ಸಾಕ್ಷಿಯು ಇರಬಹುದು ಎಂದು ಸಾಕ್ಷ್ಯ ನುಡಿಯುತ್ತಾರೆ. ವಾದಿಯು ಮದುವೆ ಆಗಿರುವ ನಂಜುಂಡಪ್ಪನವರು ಬೇರೆ ಮತ್ತು ನಾರಾಯಣಪ್ಪನ ನಂಜುಂಡಪ್ಪನ ಅಣ್ಣ ಬೇರೆ ಎಂದರೆ ಸರಿಯಲ್ಲ.

**ಓ ಎಸ್ ನಂಃ 40/2022**

**ಪಿ ಡಬ್ಲ್ಯೂ ಃ 4**

ವಾದಿ ಕಲ್ಲಹಟ್ಟಿ ಪಾಳ್ಯದಲ್ಲಿ ವಾಸವಾಗಿದ್ದಾರೆ. ವಾದಿಗೆ ಸಂಬಂಧಪಟ್ಟ ಪಡಿತರ ಚೀಟಿ, ಮತದಾರರ ಚೀಟಿ ಕಲ್ಲಹಟ್ಟಿ ಗ್ರಾಮಕ್ಕೆ ಸಂಬಂಧಪಟ್ಟಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ವಾದಿಯ ಗಂಡ ಮರಣ ಹೊಂದಿದ ನಂತರ ಆತನ ಮೃತ ದೇಹವನ್ನು ನಾರಾಯಣಪ್ಪನವರ ಜಮೀನಿನಲ್ಲಿ ದಫನ್ ಮಾಡಿರುತ್ತಾರೆ. ವಾದಿಯ ಚಿಕ್ಕಪ್ಪನವರ ಜಮೀನಿನಲ್ಲಿ ವಾದಿಯ ಗಂಡನನ್ನು ದಫನ್ ಮಾಡಿದ್ದಾರೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿಗೆ ಸಂಬಂಧಪಟ್ಟಂತೆ 1 ನೇ ಪ್ರತಿವಾದಿಯ ಹೆಸರಿನಲ್ಲಿ ಎಷ್ಟು ವರ್ಷಗಳಿಂದ ಖಾತೆ ಇದೆ ಎಂದು ನಾನು ತಿಳಿದುಕೊಂಡಿರುವುದಿಲ್ಲ. 1 ನೇ ಪ್ರತಿವಾದಿಯು ಪಾಲನಹಳ್ಳಿ ಗ್ರಾಮದ ಸರ್ವೆ ನಂ. 20/2 ರಲ್ಲಿ 2 ಎಕರೆ ಜಮೀನನ್ನು ಕ್ರಯಕ್ಕೆ ಪಡೆದಿರುವುದು ನನಗೆ ಗೊತ್ತಿಲ್ಲ. ನಾರಾಯಣಪ್ಪನವರ ಕುಟುಂಬದಲ್ಲಿ ನಡೆದ ವ್ಯವಹಾರಗಳ ಬಗ್ಗೆ ನನಗೆ ಗೊತ್ತಿಲ್ಲ. ವಾದಿಯು ಪಾಲನಹಳ್ಳಿಯಲ್ಲಿ ಯಾವತ್ತೂ ವಾಸವಾಗಿಲ್ಲ ಎಂದರೆ ಸರಿಯಲ್ಲ. ನಂಜುಂಡಪ್ಪನವರು ಬುದ್ಧಿಮಾಂದ್ಯ ವ್ಯಕ್ತಿ ಆದ ಕಾರಣ ಅವರು ಮದುವೆ ಆಗಿಲ್ಲ ಎಂದರೆ ಸರಿಯಲ್ಲ. ವಾದಿಗೆ ಮತ್ತು ಪ್ರತಿವಾದಿಗಳಿಗೆ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ವಾದಿಗೆ ದಾವಾ ಸ್ವತ್ತುಗಳಲ್ಲಿ ಭಾಗಾಂಶ ಇಲ್ಲದಿದ್ದರೂ ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯು ಅವರ ಮದುವೆಯಲ್ಲಿ ಆಮಂತ್ರಣ ಪತ್ರಿಕೆ ಪ್ರಿಂಟ್ ಮಾಡಿಸಿದ್ದಾರ ಎಂದರೆ ನನಗೆ ಗೊತ್ತಿಲ್ಲ. ದಾವಾ ಸ್ವತ್ತುಗಳಿಗೆ ನನಗೆ ಸೇರಿದ ಯಾವುದೇ ಆಸ್ತಿಗಳು ಇರುವುದಿಲ್ಲ. ತಮ್ಮ ಹಾಗೂ 1 ನೇ ಪ್ರತಿವಾದಿಯ ನಡುವೆ ಸಣ್ಣ ಪುಟ್ಟ ವಿಚಾರಗಳಿಗೆ ಸಂಬಂಧಪಟ್ಟಂತೆ ವೈಶಮ್ಯ ಇರುವ ಕಾರಣ ತಾವು 1 ನೇ ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ಉಖ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

**ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಮಾಗಡಿ.**